ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಿ5(2)ಮುಂಬಡ್ತಿ- 26/2016-17** **ದಿನಾಂಕ : 08/11/2017**

**ಜ್ಞಾಪನಾ**

ವಿಷಯ : ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತರ ಆಡಳಿತ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು(ಆಡಳಿತ) ಗಳಿಗೆ ಪತ್ರಾಂಕಿತ ಸಹಾಯಕರ ಹುದ್ದೆಗೆ ಕೆ.ಸಿ.ಎಸ್.ಆರ್. ನಿಯಮ-32 ರನ್ವಯ ಸ್ವತಂತ್ರ ಪ್ರಭಾರದಲ್ಲಿ ಇರಿಸಿ ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ.

* * * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತರ ಆಡಳಿತ ವ್ಯಾಪ್ತಿಯಲ್ಲಿ ಬರುವ ಕಛೇರಿಗಳಲ್ಲಿ ಖಾಲಿ ಇರುವ ಪತ್ರಾಂಕಿತ ಸಹಾಯಕರ ಹುದ್ದೆಗೆ ಸೇವಾ ಜೇಷ್ಠತೆಯ ಆಧಾರದ ಮೇರೆಗೆ ಅರ್ಹರಿರುವ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು(ಆಡಳಿತ) ಗಳಿಗೆ ಕೆ.ಸಿ.ಎಸ್.ಆರ್. ನಿಯಮ-32 ರನ್ವಯ ಸ್ವತಂತ್ರ ಪ್ರಭಾರದಲ್ಲಿರಿಸಿ ಸ್ಥಳನಿಯುಕ್ತಿಗೊಳಿಸಲು ಉದ್ದೇಶಿಸಲಾಗಿದ್ದು, ಜೇಷ್ಠತೆಯನುಸಾರ ಅರ್ಹರಿರುವ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು(ಆಡಳಿತ) ಪಟ್ಟಿಯನ್ನು ಈ ಪತ್ರದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ವಿವರಿಸಲಾಗಿದೆ. ಪ್ರತಿ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು(ಆಡಳಿತ) ಅಧಿಕಾರಿಯಂತೆ ಈ ಕೆಳಕಂಡ ದಾಖಲೆಗಳನ್ನು ಒಳಗೊಂಡ ಡೋಸಿಯರ್‌ನ್ನು ಸಿದ್ದಪಡಿಸಿ ಆದ್ಯತೆಯ ಮೇರೆಗೆ ಈ ಕಛೇರಿಗೆ ಕಳುಹಿಸಲು ತಿಳಿಸಿದೆ.

1) 2012-13 ರಿಂದ 2016-17 ನೇ ಸಾಲಿನವರೆಗಿನ ಕಾರ್ಯನಿರ್ವಹಣಾ ವರದಿಗಳು. **ಕಾರ್ಯನಿರ್ವಹಣಾ ವರದಿಗಳಲ್ಲಿ ಪರಿಶೀಲನಾಧಿಕಾರಿಗಳ ಹಾಗೂ ಅಂಗೀಕಾರ ಪ್ರಾಧಿಕಾರಿಗಳು ಕಡ್ಡಾಯವಾಗಿ ಅವರ ಷರಾ ನಮೂದಿಸಿ ಸಹಿ ಮಾಡತಕ್ಕದ್ದು.**
2) ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್, ಜನರಲ್ ಲಾ ಭಾಗ-1 ಗಳಲ್ಲಿ ಉತ್ತೀರ್ಣರಾದ ಬಗ್ಗೆ ದಾಖಲೆಗಳ ಪ್ರತಿ.
3) ಕನ್ನಡ ಭಾಷಾ ಪರೀಕ್ಷೆ ತೇರ್ಗಡೆ ಪ್ರಮಾಣ ಪತ್ರ / ವಿನಾಯ್ತಿ ಪ್ರಪತ್ರ.
4) ಅಧಿಕಾರಿಗಳ ಸೇವಾ ವಿವರಗಳು – ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ
5) ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಅಥವಾ ನ್ಯಾಯಾಲಯದ ಪ್ರಕರಣಗಳಾಗಲೀ ಬಾಕಿ ಇರುವ / ಇಲ್ಲದೇ ಇರುವ ಬಗ್ಗೆ ದೃಢೀಕರಣ ಪತ್ರ. (ವಿಚಾರಣೆಗಳು ಬಾಕಿ ಇದ್ದಲ್ಲಿ ಸಿ.ಸಿ.ಎ. ನಿಯಮದಂತೆ ಕರಡು ಆರೋಪ ಪಟ್ಟಿ ಜಾರಿಯಾಗಿರಬೇಕು)
6) ಜಾತಿ ಪ್ರಮಾಣ ಪತ್ರ.
7) **ಒಂದು ವೇಳೆ ಪಟ್ಟಿಯಲ್ಲಿರುವ ಸಿಬ್ಬಂದಿಗಳ ವಿರುದ್ಧ ಶಿಸ್ತು ಪ್ರಕರಣ / ನ್ಯಾಯಾಲಯ ಪ್ರಕರಣ ಬಾಕಿ ಇದ್ದಲ್ಲಿಯೂ ಸಹ ಅವರುಗಳ ಕಾರ್ಯನಿರ್ವಹಣಾ ವರದಿಗಳನ್ನು ಹಾಗೂ ನಿಗಧಿತ ಇಲಾಖಾ ಪರೀಕ್ಷೆಗಳ ಪ್ರಮಾಣ ಪತ್ರಗಳ ಪ್ರತಿಯನ್ನು ಪಡೆದು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.**

ಪ್ರತಿ ಸಿಬ್ಬಂಧಿವಾರು ಮಾಹಿತಿ / ದಾಖಲೆಗಳನ್ನು ಒಳಗೊಂಡಿರುವ ಪ್ರಸ್ತಾವನೆಯನ್ನು ದಿನಾಂಕ : 25/11/2017 ರೊಳಗಾಗಿ ಈ ಕಛೇರಿಗೆ ಮುದ್ದಾಂ ಸಲ್ಲಿಸಲು ತಿಳಿಸಿದೆ.

(ಎಸ್. ಕಾತ್ಯಾಯಿನಿದೇವಿ)
ಜಂಟಿ ನಿರ್ದೇಶಕರು(ಆಡಳಿತ)

08/11/17

ಇವರಿಗೆ :-

1) ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು ರವರಿಗೆ.
2) ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಬೆಂಗಳೂರು ರವರಿಗೆ.
3) ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು ಇವರಿಗೆ
4) ಸಂಬಂಧಿಸಿದ ಜಿಲ್ಲೆಗಳ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳಿಗೆ ಮುಂದಿನ ಕ್ರಮಕ್ಕಾಗಿ

5) ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
6) ಸಂಬಂಧಿಸಿದ ಅಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ
7) ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು,

ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ : ಸಿ5(2)ಮುಂಬಡ್ತಿ– 26/2016–17 ದಿನಾಂಕ : 08/11/2017

ಅನುಬಂಧ

ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಕೆ.ಸಿ.ಎಸ್.ಆರ್. ನಿಯಮ–32 ರನ್ವಯ ಸ್ವತಂತ್ರ ಪ್ರಭಾರದಲ್ಲಿರಿಸಿ ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕಾದ ಅಧಿಕಾರಿಗಳ ವಿವರ

| ಕ್ರ. ಸಂ. | ಅಧಿಕಾರಿಯ ಹೆಸರು ಮತ್ತು ಕಛೇರಿ ವಿಳಾಸ<br>ಶ್ರೀಮತಿ / ಶ್ರೀ | 2016 ರಲ್ಲಿನ ಪತ್ರಾಂಕಿತ ವ್ಯವಸ್ಥಾಪಕರ ಜೇಷ್ಠತಾ ಸಂಖ್ಯೆ | ಪ್ರವರ್ಗ | ಷರಾ |
|---|---|---|---|---|
| 1 | ವಿ. ಕೃಷ್ಣಾ ರೆಡ್ಡಿ, ಸಹಾಯಕ ನಿರ್ದೇಶಕರು, ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು (ಪ್ರಸ್ತುತ ನಿಯೋಜನೆ ಮೇರೆಗೆ ಆಯುಕ್ತರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು) | 80 | ಇತರೆ | 2016–17 ನೇ ಸಾಲಿನ ಕಾರ್ಯ ನಿರ್ವಹಣಾ ವರದಿ ಹಾಗೂ ಶಿಸ್ತು ಪ್ರಕರಣ ಬಾಕಿ ಇಲ್ಲದೇ ಇರುವ ಬಗ್ಗೆ ದೃಢೀಕರಣ ಪತ್ರ |
| 2 | ಎಂ.ಸಿ. ಕೆಂಪರಾಜು, ಸಹಾಯಕ ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | 91 | ಇತರೆ | 2016–17 ನೇ ಸಾಲಿನ ಕಾರ್ಯ ನಿರ್ವಹಣಾ ವರದಿ ಹಾಗೂ ಶಿಸ್ತು ಪ್ರಕರಣ ಬಾಕಿ ಇಲ್ಲದೇ ಇರುವ ಬಗ್ಗೆ ದೃಢೀಕರಣ ಪತ್ರ |
| 3 | ಹೆಚ್.ವಿ. ಶಂಕರನಾರಾಯಣ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಅರಸೀಕೆರೆ ತಾಲ್ಲೂಕು, ಹಾಸನ ಜಿಲ್ಲೆ | 92 | ಇತರೆ | 2016–17 ನೇ ಸಾಲಿನ ಕಾರ್ಯ ನಿರ್ವಹಣಾ ವರದಿ ಹಾಗೂ ಶಿಸ್ತು ಪ್ರಕರಣ ಬಾಕಿ ಇಲ್ಲದೇ ಇರುವ ಬಗ್ಗೆ ದೃಢೀಕರಣ ಪತ್ರ |
| 4 | ಎಸ್. ದ್ಯಾವೇಗೌಡ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹಾಸನ | 93 | ಇತರೆ | 2016–17 ನೇ ಸಾಲಿನ ಕಾರ್ಯ ನಿರ್ವಹಣಾ ವರದಿ ಹಾಗೂ ಶಿಸ್ತು ಪ್ರಕರಣ ಬಾಕಿ ಇಲ್ಲದೇ ಇರುವ ಬಗ್ಗೆ ದೃಢೀಕರಣ ಪತ್ರ |
| 5 | ಬಿ. ಲಲಿತ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹೊಳೇನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ | 108 | ಇತರೆ | ಜ್ಞಾಪನದಲ್ಲಿ ಸೂಚಿಸಿರುವಂತೆ ಕ್ರಸಂ. 01 ರಿಂದ 06 ರವರೆಗಿನ ದಾಖಲೆಗಳು |

| | | | | |
|---|---|---|---|---|
| 6 | ಎಂ. ಶಶಿಧರನ್, ಪತ್ರಾಂಕಿತ ವ್ಯವಸ್ಥಾಪಕರು, ಸಹ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು | 186 | ಪ.ಜಾತಿ | ಜ್ಞಾಪನದಲ್ಲಿ ಸೂಚಿಸಿರುವಂತೆ ಕ್ರ.ಸಂ. 01 ರಿಂದ 06 ರವರೆಗಿನ ದಾಖಲೆಗಳು |

(ಎಸ್. ಕಾತ್ಯಾಯನಿದೇವಿ)
ಜಂಟಿ ನಿರ್ದೇಶಕರು(ಆಡಳಿತ)
08/11/17

## ನಮೂನೆ

**ಪತ್ರಾಂಕಿತ ಸಹಾಯಕರ ವೃಂದಕ್ಕೆ ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿರಿಸಿ ಸ್ಥಳ ನಿಯುಕ್ತಿಗೊಳಿಸಲು ಅಗತ್ಯವಿರುವ ಮಾಹಿತಿ**

| ಕ್ರಸಂ. | ಅಧಿಕಾರಿಗಳ ಸೇವಾ ವಿವರ | ಮಾಹಿತಿ |
|---|---|---|
| 1 | ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯ ಜೇಷ್ಠತಾ ಕ್ರಮಾಂಕ | |
| 2 | ಅಧಿಕಾರಿಯ ಹೆಸರು | |
| 3 | ಪದನಾಮ | |
| 4 | ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಕಛೇರಿಯ ಪೂರ್ಣ ವಿಳಾಸ<br><br>ಮೊಬೈಲ್ ಸಂಖ್ಯೆ : | |
| 5 | ಜನ್ಮ ದಿನಾಂಕ | |
| 6 | ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯಲ್ಲಿ ಬಡ್ತಿ ಸಕ್ರಮಗೊಂಡ ದಿನಾಂಕ | |
| 7 | ಗುಂಪು (ಪ.ಜಾತಿ, ಪ.ವರ್ಗ/ ಇತರೆ) | |
| 8 | ಇಲಾಖಾ ಪರೀಕ್ಷಗಳಲ್ಲಿ ಉತ್ತೀರ್ಣತೆ<br>1. ಅಕೌಂಟ್ಸ್ ಹೈಯರ್<br>2. ಜನರಲ್ ಲಾ ಭಾಗ 1<br>3. ಕನ್ನಡ ಭಾಷಾ ಪರೀಕ್ಷೆ | **ನೋಂದಣಿ ಸಂಖ್ಯೆ**    **ದಿನಾಂಕ** |
| 9 | ಕಾರ್ಯನಿರ್ವಹಣಾ ವರದಿಗಳು 2012-13 ರಿಂದ 2016-17 ರವರೆವಿಗೆ ವರ್ಷವಾರು ಪ್ರತ್ಯೇಕವಾಗಿ ಸಲ್ಲಿಸುವುದು | |
| 10 | ಇಲಾಖಾ ವಿಚಾರಣೆ / ದೂರು/ ನ್ಯಾಯಲಯದ ಪ್ರಕರಣಗಳು ಇದ್ದಲ್ಲಿ ವಿವರ | |
| 11 | ಷರಾ | |

ಮೇಲ್ಕಂಡ ಎಲ್ಲಾ ಅಂಶಗಳು ಸಂಬಂಧಿತ ಅಧಿಕಾರಿಗಳ ಸೇವಾ ವಿವರ / ವಹಿಯನ್ನು ಪರಿಶೀಲಿಸಿ, ಮಾಹಿತಿಯನ್ನು ನೀಡಲಾಗಿದೆ ಎಂದು ಈ ಮೂಲಕ ದೃಢೀಕರಿಸಸುತ್ತೇನೆ.

ದಿನಾಂಕ :

ಸ್ಥಳ :

ಕಛೇರಿ ಮುಖ್ಯಸ್ಥರ ಸಹಿ
ಮೊಹರಿನೊಂದಿಗೆ